Akashvani : Bangalore
National Bulletin In Kannada
17.06.2024 / 13.10 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
17.06.2024 / 13.10 hrs

<><*<><>*><>

ಮುಖ್ಯಾಂಶಗಳು

೧. ಭಾರತದ ಜವಳಿ ರಫ್ತು ಶೇಕಡ ೯.೬ ರಷ್ಟು ಏರಿಕೆ

೨. ದೇಶಾದ್ಯಂತ ಶ್ರದ್ಧಾ-ಭಕ್ತಿಗಳಿಂದ ಈದ್-ಉಲ್-ಅಧಾ ಆಚರಣೆ ; ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ ಶುಭಾಶಯ

೩. ನಾಳೆ ಪಿಎಂ-ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ೯ ಕೋಟಿ ೩ ಲಕ್ಷ ೨೦ ಸಾವಿರ ಕೋಟಿ ನಗದು ವರ್ಗಾವಣೆ

೪. ಇದೇ ೩೦ ರಂದು ಮನ್ ಕಿ ಬಾತ್ ೧೧೧ನೇ ಸಂಚಿಕೆ ಪ್ರಸಾರ

೫. ಟಿ-೨೦ ವಿಶ್ವಕಪ್ ಕ್ರಿಕೆಟ್ : ನೆದರ್‌ಲ್ಯಾಂಡ್ಸ್ ವಿರುದ್ಧ ಶ್ರೀಲಂಕಾಗೆ ೮೩ ರನ್‌ಗಳ ಜಯ

<><*<><>*><>

ಹಿಂದಿನ ವರ್ಷದ ಇದೇ ತಿಂಗಳಿಗೆ ಹೋಲಿಸಿದರೆ ಭಾರತದ ಜವಳಿ ರಫ್ತು ಈ ವರ್ಷದ ಮೇ ತಿಂಗಳಲ್ಲಿ ಶೇಕಡ ೯.೬ರಷ್ಟು ಏರಿಕೆಯಾಗಿದೆ. ಐರೋಪ್ಯ ಒಕ್ಕೂಟ, ಅಮೆರಿಕಾ ಹಾಗೂ ಪಶ್ಚಿಮ ಏಷ್ಯಾಗಳಂತಹ ಪ್ರಮುಖ ಮಾರುಕಟ್ಟೆಗಳಲ್ಲಿ ಪ್ರತಿಕೂಲ ಆರ್ಥಿಕ ಪರಿಸ್ಥಿತಿಗಳ ನಡುವೆಯೂ ಭಾರತದ ಜವಳಿ ರಫ್ತು ಹೆಚ್ಚಾಗಿರುವುದು ಗಮನಾರ್ಹ. ಇದಲ್ಲದೆ, ದೇಶದಿಂದ ಸಿದ್ಧ ಉಡುಪುಗಳ ರಫ್ತು ಇದೇ ಅವಧಿಯಲ್ಲಿ ಶೇಕಡಾ ೯.೮೪ರಷ್ಟು ಏರಿಕೆ ಕಂಡಿದೆ ಎಂದು ಕಾನ್ಫೆಡರೇಶನ್ ಆಫ್ ಇಂಡಿಯನ್ ಟೆಕ್ಸ್‌ಟೈಲ್ ಇಂಡಸ್ಟ್ರಿಯ ವರದಿ ತಿಳಿಸಿದೆ. ಮೇ ೨೦೨೪ ರಲ್ಲಿ ಜವಳಿ ಮತ್ತು ಉಡುಪುಗಳ ಸಂಯೋಜಿತ ರಫ್ತು ಕಳೆದ ವರ್ಷದ ಮೇ ತಿಂಗಳಿಗೆ ಹೋಲಿಸಿದರೆ ಶೇಕಡಾ ೯.೬೦ರಷ್ಟು ಬೆಳವಣಿಗೆಯನ್ನು ದಾಖಲಿಸಿದೆ ಎಂದು ವರದಿ ಹೇಳಿದೆ. ವಾಣಿಜ್ಯ ಸಚಿವಾಲಯ ಬಿಡುಗಡೆ ಮಾಡಿದ ಅಂಕಿಅಂಶಗಳ ಪ್ರಕಾರ, ಮೇ ೨೦೨೪ರಲ್ಲಿ ಭಾರತದ ಒಟ್ಟಾರೆ ರಫ್ತು ೬೮.೨೯ ಬಿಲಿಯನ್ ಡಾಲರ್‌ಗೆ ಏರಿದೆ. ಇದು ವರ್ಷದಿಂದ ವರ್ಷಕ್ಕೆ ಶೇಕಡಾ ೧೦.೨ರಷ್ಟು ಗಣನೀಯ ಹೆಚ್ಚಳವಾಗಿದೆ. ೨೦೨೪ರ ಏಪ್ರಿಲ್-ಮೇ ಅವಧಿಯಲ್ಲಿ, ಭಾರತೀಯ ಜವಳಿ ರಫ್ತು ಹಿಂದಿನ ವರ್ಷಕ್ಕೆ ಹೋಲಿಸಿದರೆ ಶೇಕಡಾ ೬.೧೪ರಷ್ಟು ಏರಿಕೆಯಾಗಿದೆ. ಇದೇ ಅವಧಿಯಲ್ಲಿ ಉಡುಪು ರಫ್ತು ಶೇಕಡಾ ೪.೪೬ರಷ್ಟು ಹೆಚ್ಚಾಗಿದೆ. ೨೦೨೪ರ ಏಪ್ರಿಲ್-ಮೇ ಅವಧಿಯಲ್ಲಿ ಜವಳಿ ಮತ್ತು ಉಡುಪುಗಳ ಸಂಚಿತ ರಫ್ತು ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಶೇಕಡಾ ೫.೩೪ರಷ್ಟು ಏರಿಕೆ ಕಂಡಿದೆ. ಎಲೆಕ್ಟ್ರಾನಿಕ್ ಸರಕುಗಳು, ಔಷಧಿಗಳು, ಸಾವಯವ ಮತ್ತು ಅಜೈವಿಕ ರಾಸಾಯನಿಕಗಳು, ಎಂಜಿನಿಯರಿಂಗ್ ಸರಕುಗಳು ಮತ್ತು ಪೆಟ್ರೋಲಿಯಂ ಉತ್ಪನ್ನಗಳ ರಫ್ತಿನಲ್ಲಿಯೂ ಉತ್ತಮ ಬೆಳವಣಿಗೆಯಾಗಿದೆ ಎಂದು ಇತ್ತೀಚೆಗೆ ಬಿಡುಗಡೆಯಾದ ರಫ್ತು ದತ್ತಾಂಶ ತೋರಿಸಿದೆ. ಅಮೆರಿಕಾ, ಯುಎಇ, ನೆದರ್‌ಲ್ಯಾಂಡ್ಸ್, ಬ್ರಿಟನ್ , ಚೀನಾ, ಸಿಂಗಾಪುರ್, ಸೌದಿ ಅರೇಬಿಯಾ, ಬಾಂಗ್ಲಾದೇಶ, ಜರ್ಮನಿ ಹಾಗೂ ಫ್ರಾನ್ಸ್ ಭಾರತದ ಅಗ್ರ ೧೦ ರಫ್ತು ಮಾರುಕಟ್ಟೆ

ದೇಶಗಳಾಗಿವೆ" ಎಂದು ಫೆಡರೇಶನ್ ಆಫ್ ಇಂಡಿಯನ್ ಎಕ್ಸ್‌ಪೋರ್ಟ್ ಆರ್ಗನೈಸೇಷನ್ಸ್ ಅಧ್ಯಕ್ಷ ಅಶ್ವನಿ ಕುಮಾರ್ ಹೇಳಿದ್ದಾರೆ. ಭಾರತದ ಒಟ್ಟಾರೆ ಸರಕು ರಫ್ತು ಶೇಕಡಾ ೯.೧ರಷ್ಟು ಏರಿಕೆಯಾಗಿ ೩೮.೧೩ ಬಿಲಿಯನ್ ಡಾಲರ್‌ಗೆ ತಲುಪಿದ್ದರೆ, ಸೇವಾ ರಫ್ತು ಶೇಕಡಾ ೧೧.೭ರಷ್ಟು ಏರಿಕೆಯಾಗಿ ೩೦.೧೬ ಬಿಲಿಯನ್ ಡಾಲರ್‌ಗೆ ತಲುಪಿದೆ.

<><*<><>*><>

ದೇಶಾದ್ಯಂತ ಇಂದು ಮುಸ್ಲಿಂ ಬಾಂಧವರು ಬಕ್ರಿದ್ ಹಬ್ಬವನ್ನು ಶ್ರದ್ಧಾ-ಭಕ್ತಿಯಿಂದ ಆಚರಿಸುತ್ತಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಪ್ರಧಾನಿ ನರೇಂದ್ರ ಮೋದಿ ಬಕ್ರಿದ್ ಅಂಗವಾಗಿ ದೇಶದ ಜನರಿಗೆ ಶುಭಾಶಯ ಕೋರಿದ್ದಾರೆ. ಈದ್-ಉಲ್-ಅಝಾ ಪವಿತ್ರ ಹಬ್ಬವು ತ್ಯಾಗ ಹಾಗೂ ತ್ಯಾಗದ ಸಂಕೇತವಾಗಿದೆ ಎಂದು ರಾಷ್ಟ್ರಪತಿ ತಮ್ಮ ಸಂದೇಶದಲ್ಲಿ ಹೇಳಿದ್ದಾರೆ. ಈದ್-ಉಲ್-ಅಧಾ ಹಬ್ಬವು ಏಕತೆ, ದಯೆ ಹಾಗೂ ಒಗ್ಗಟ್ಟಿನ ಮೌಲ್ಯಗಳನ್ನು ಪ್ರತಿಬಿಂಬಿಸಲಿದೆ ಎಂದು ತಮ್ಮ ಸಂದೇಶದಲ್ಲಿ ಉಪರಾಷ್ಟ್ರಪತಿ ಹೇಳಿದ್ದಾರೆ. ಈದ್-ಉಲ್-ಅಧಾ ಹಬ್ಬವು ಸಮಾಜದಲ್ಲಿ ಸಾಮರಸ್ಯ ಮತ್ತು ಒಗ್ಗಟ್ಟಿನ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸುತ್ತದೆ ಎಂದು ಪ್ರಧಾನಿ ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ. ಎಲ್ಲರೂ ಸುಖ, ಸಂತೋಷದಿಂದ ಆರೋಗ್ಯವಂತರಾಗಿರಲಿ ಎಂದು ಹಾರೈಸಿದ್ದಾರೆ.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿಯವರು ನಾಳೆ 'ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ' ಯೋಜನೆಯಡಿ ೯ ಕೋಟಿ ೩ ಲಕ್ಷ ರೈತರ ಖಾತೆಗೆ ೨೦ ಸಾವಿರ ಕೋಟಿ ರೂಪಾಯಿ ಹಣವನ್ನು ವರ್ಗಾವಣೆ ಮಾಡಲಿದ್ದಾರೆ. ಕೇಂದ್ರ ಗ್ರಾಮೀಣಾಭಿವೃದ್ಧಿ, ಕೃಷಿ ಹಾಗೂ ರೈತ ಕಲ್ಯಾಣ ಖಾತೆ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಈ ವಿಷಯ ಪ್ರಕಟಿಸಿದ್ದಾರೆ. ಕಳೆದ ಹತ್ತು ವರ್ಷಗಳಲ್ಲಿ ೧೧ ಕೋಟಿ ರೈತರ ಖಾತೆಗಳಿಗೆ ೩ಲಕ್ಷ ಕೋಟಿ ರೂಪಾಯಿಗಳನ್ನು ಯೋಜನೆಯಡಿ ವರ್ಗಾಯಿಸಲಾಗಿದೆ ಎಂದು ಅವರು ಹೇಳಿದ್ದಾರೆ. ನಾಳೆ ವಾರಾಣಸಿಯಲ್ಲಿ ನಡೆಯಲಿರುವ ಪ್ರಧಾನಿಮಂತ್ರಿಯವರ ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಎಲ್ಲ ಮುಖ್ಯಮಂತ್ರಿಗಳಿಗೆ ಪತ್ರ ಬರೆದಿರುವುದಾಗಿ, ರೈತರ ಕಲ್ಯಾಣ ವಿಷಯಕ್ಕೆ ಸಂಬಂಧಿಸಿದ ಎಲ್ಲ ವಿಚಾರಗಳ ಬಗ್ಗೆ ಅಧಿಕಾರಗಳೊಂದಿಗೆ ಚರ್ಚೆ ನಡೆಸಿರುವುದಾಗಿ ತಿಳಿಸಿದ ಅವರು, ಸರ್ಕಾರದ ೧೦೦ ದಿನಗಳ ಕಾರ್ಯ ಯೋಜನೆಯ ಬಗ್ಗೆ ಪರಿಶೀಲನೆ ನಡೆಸಿದ್ದಾಗಿ ಹೇಳಿದ್ದಾರೆ.

<><*<><>*><>

'ಸ್ವಂತಕ್ಕಾಗಿ ಹಾಗೂ ಸಮಾಜಕ್ಕಾಗಿ ಯೋಗ' ಎಂಬ ಧ್ಯೇಯದಡಿ, ೧೦ನೇ ಅಂತಾರಾಷ್ಟ್ರೀಯ ಯೋಗ ದಿನವನ್ನು ಇದೇ ೨೧ ರಂದು, ಶುಕ್ರವಾರ ದೇಶಾದ್ಯಂತ ಆಚರಿಸಲಾಗುತ್ತಿದೆ. ಯೋಗದಿನದ ೧೦ನೇ ಆವೃತ್ತಿಯ ಪೂರ್ವಭಾವಿಯಾಗಿ ಪ್ರಧಾನಿ ನರೇಂದ್ರ ಮೋದಿ ಇಂದು ಸಾಮಾಜಿಕ ಮಾಧ್ಯಮದಲ್ಲಿ ಭದ್ರಾಸನ ಭಂಗಿಯನ್ನು ಹಂಚಿಕೊಂಡಿದ್ದಾರೆ. ವಿಡಿಯೋವನ್ನು ಹಂಚಿಕೊಂಡಿರುವ ಪ್ರಧಾನಿ ಈ ಆಸನವು ಕೀಲುಗಳನ್ನು ಬಲಪಡಿಸಲು ಉತ್ತಮವಾಗಿದ್ದು, ಮೊಣಕಾಲುಗಳಲ್ಲಿನ ನೋವನ್ನು ಕಡಿಮೆ ಮಾಡುವುದರ ಜೊತೆಗೆ ಹೊಟ್ಟೆಗೂ ಒಳ್ಳೆಯ ವ್ಯಾಯಮ ಎಂದು ತಿಳಿಸಿದ್ದಾರೆ.

<><*<><>*><>

ಆಕಾಶವಾಣಿಯ ಜನಪ್ರಿಯ ‘ಮನ್ ಕಿ ಬಾತ್’ ಕಾರ್ಯಕ್ರಮ, ಇದೇ ತಿಂಗಳ ೩೦ ರಂದು, ೧೧೧ನೇ ಸಂಚಿಕೆ ಪ್ರಸಾರವಾಗಲಿದೆ. ಪ್ರಧಾನಮಂತ್ರಿ ನರೇಂದ್ರಮೋದಿ ಅವರು, ತಮ್ಮ ಮನದಮಾತನ್ನು ದೇಶ, ವಿದೇಶಗಳ ಜನತೆಯೊಂದಿಗೆ, ಹಂಚಿಕೊಳ್ಳಲಿದ್ದಾರೆ. ಸತತ ಮೂರನೇ ಅವಧಿಗೆ ಪ್ರಧಾನಮಂತ್ರಿಯಾಗಿ, ನರೇಂದ್ರ ಮೋದಿಯವರು ಆಯ್ಕೆಯಾದ ನಂತರ, ಪ್ರಸಾರವಾಗಲಿರುವ ಮೊದಲ ಸಂಚಿಕೆಯಾಗಿದೆ. ಟೋಲ್‌ಫ್ರೀ ಸಂಖ್ಯೆ ೧೮೦೦-೧೧-೭೮೦೦, ನಮೋ ಆಪ್ ಅಥವಾ ಮೈಜಿ.ಒ.ವಿ ಡಾಟ್ ಇನ್ ಮೂಲಕ, ಇದೇ ೨೮ ರವರೆಗೆ ಜನತೆ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಬಹುದು.

<><*<><>*><>

ಹೊಸ ಕ್ರಿಮಿನಲ್ ಕಾನೂನುಗಳನ್ನು ಜಾರಿಗೆ ತರುವ ನಿರ್ಧಾರವನ್ನು ಕೇಂದ್ರ ಸರ್ಕಾರ ಮರು ಪರಿಶೀಲಿಸುತ್ತಿಲ್ಲ ಎಂದು ಕೇಂದ್ರ ಕಾನೂನು ಮತ್ತು ನ್ಯಾಯ ಖಾತೆ ರಾಜ್ಯ ಸಚಿವ ಅರ್ಜುನ್ ರಾಮ್ ಮೇಘವಾಲ್ ಸ್ಪಷ್ಟಪಡಿಸಿದ್ದಾರೆ. ಭಾರತೀಯ ದಂಡ ಸಂಹಿತೆ ೧೮೬೦, ಭಾರತೀಯ ಸಾಕ್ಷ್ಯ ಕಾಯ್ದೆ ೧೮೭೨ ಮತ್ತು ಅಪರಾಧ ಪ್ರಕ್ರಿಯಾ ಸಂಹಿತೆ ೧೯೭೩ ಅನ್ನು ಬದಲಿಸುವ ಕಾನೂನುಗಳು ಜುಲೈ ೧ ರಿಂದ ಜಾರಿಗೆ ಬರಲಿವೆ ಎಂದು ಅವರು ಹೇಳಿದ್ದಾರೆ. ಭಾರತೀಯ ನ್ಯಾಯ್ ಸಂಹಿತಾ, ಭಾರತೀಯ ಸುರಕ್ಷಾ ಸಂಹಿತಾ ಮತ್ತು ಭಾರತೀಯ ಸಾಕ್ಷ್ಯ ಅಧಿನಿಯಮ್ ಎಂಬ ಹೊಸ ಕ್ರಿಮಿನಲ್ ಕಾನೂನುಗಳು ಜುಲೈ ೧ ರಿಂದ ಜಾರಿಗೆ ಬರಲಿವೆ ಎಂದು ತಿಳಿಸಿದ್ದಾರೆ. "ಐಪಿಸಿ, ಸಿಆರ್‌ಪಿಸಿ ಹಾಗೂ ಭಾರತೀಯ ಸಾಕ್ಷ್ಯ ಕಾಯ್ದೆಗಳು ಬದಲಾಗುತ್ತಿವೆ. ಸೂಕ್ತ ಸಮಾಲೋಚನೆ ಪ್ರಕ್ರಿಯೆ ಅನುಸರಣೆ ಹಾಗೂ ಕಾನೂನು ಆಯೋಗದ ವರದಿಗಳನ್ನು ಗಮನದಲ್ಲಿಟ್ಟುಕೊಂಡು ಈ ಮೂರು ಕಾನೂನುಗಳನ್ನು ಬದಲಾಯಿಸಲಾಗಿದೆ" ಎಂದು ಮೇಘವಾಲ್ ತಿಳಿಸಿದರು. ಮೂರು ಹೊಸ ಕಾನೂನುಗಳ ತರಬೇತಿ ಸೌಲಭ್ಯಗಳನ್ನು ಎಲ್ಲಾ ರಾಜ್ಯಗಳಿಗೂ ಒದಗಿಸಲಾಗುತ್ತಿದೆ" ಎಂದು ಮೇಘವಾಲ್ ವಿವರಿಸಿದ್ದಾರೆ. "ನಮ್ಮ ನ್ಯಾಯಾಂಗ ಅಕಾಡೆಮಿಗಳು, ರಾಷ್ಟ್ರೀಯ ಕಾನೂನು ವಿಶ್ವವಿದ್ಯಾಲಯಗಳು ಸಹ ಈ ಬಗ್ಗೆ ತರಬೇತಿ ನೀಡುತ್ತಿವೆ. ಎಲ್ಲವೂ ಜೊತೆಜೊತೆಯಾಗಿ ಸಾಗುತ್ತಿದೆ ಮತ್ತು ಜುಲೈ ೧ ರಿಂದ, ಕ್ರಿಮಿನಲ್ ನ್ಯಾಯ ವ್ಯವಸ್ಥೆಗೆ ನಿರ್ಣಾಯಕವಾದ ಈ ಎಲ್ಲಾ ಮೂರು ಕಾನೂನುಗಳನ್ನು ದೇಶದಲ್ಲಿ ಜಾರಿಗೆ ತರಲಾಗುವುದು" ಎಂದು ಅವರು ಸ್ಪಷ್ಟಪಡಿಸಿದರು. ದೇಶದಲ್ಲಿ ಅಪರಾಧ ನ್ಯಾಯ ಸುಧಾರಣೆಯು ದೇಶದ ನ್ಯಾಯದಾನ ಪ್ರಕ್ರಿಯೆಯಲ್ಲಿ ಗಮನಾರ್ಹ ಬದಲಾವಣೆಯನ್ನು ಇದು ಸೂಚಿಸುತ್ತದೆ. ಮಹಿಳೆಯರು, ಮಕ್ಕಳು ಮತ್ತು ರಾಷ್ಟ್ರದ ವಿರುದ್ಧದ ಅಪರಾಧಗಳನ್ನು ಇದು ಮುಂಚೂಣಿಯಲ್ಲಿರಿಸುತ್ತದೆ. ಅಲ್ಲದೆ ಇದು ವಸಾಹತುಶಾಹಿ ಯುಗದ ಕಾನೂನುಗಳಿಗೆ ಸಂಪೂರ್ಣವಾಗಿ ವಿರುದ್ಧವಾಗಿದೆ ಎಂದು ಹೇಳಿದ್ದಾರೆ.

<><*<><>*><>

ಭಾರತವು ತನ್ನದೇ ಆದ ಡೀಪ್ ಸೀ ಮಿಷನ್ ಹೊಂದಿರುವ ೬ ನೇ ರಾಷ್ಟ್ರವಾಗಲಿದೆ ಎಂದು ಕೇಂದ್ರ ಭೂ ವಿಜ್ಞಾನ ಖಾತೆ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ಹೇಳಿದ್ದಾರೆ. ನಿನ್ನೆ ನವದೆಹಲಿಯಲ್ಲಿ ಭೂ ವಿಜ್ಞಾನ ಸಚಿವಾಲಯದ ೧೦೦ ದಿನಗಳ ಕ್ರಿಯಾ ಯೋಜನೆ ಕುರಿತು ಚರ್ಚಿಸಲು ನಡೆದ ಸಭೆಯ ಅಧ್ಯಕ್ಷತೆ ವಹಿಸಿದ್ದ ಡಾ.ಜಿತೇಂದ್ರ ಸಿಂಗ್ ಅವರು ಈ ವಿಷಯ ತಿಳಿಸಿದ್ದಾರೆ. ಆಳವಾದ ಸಮುದ್ರದ ಕಾರ್ಯಾಚರಣೆಯ ಪ್ರಗತಿಯ ಬಗ್ಗೆ ಹೆಮ್ಮೆ ಮತ್ತು ಸಂತೋಷವನ್ನು ವ್ಯಕ್ತಪಡಿಸಿದ ಸಚಿವರು, ಈ ಸಾಧನೆಯನ್ನು ಸಾಧಿಸಿದ ಕೆಲವೇ ರಾಷ್ಟ್ರಗಳಲ್ಲಿ ಭಾರತವೂ ಸೇರಿದೆ ಎಂದು ಹೇಳಿದರು. ಜೀವನೋಪಾಯಕ್ಕಾಗಿ ಸಾಗರವನ್ನು ಅವಲಂಬಿಸಿರುವ ಜನರನ್ನು ಸಬಲೀಕರಣಗೊಳಿಸಲು ನೀಲಿ ಆರ್ಥಿಕತೆಯನ್ನು ಸಾಧಿಸುವತ್ತ ಗಮನಹರಿಸುವಂತೆ ಅವರು ಸಂಬಂಧಿಸಿದ ಸಂಸ್ಥೆಗಳಿಗೆ ತಿಳಿಸಿದರು. ಆಳವಾದ ಸಮುದ್ರದ ಕಾರ್ಯಾಚರಣೆಗಳ ಬಗ್ಗೆ ಚರ್ಚಿಸಿದ ಅವರು, ಆಳ ಸಮುದ್ರ ಕಾರ್ಯಚರಣೆ

ಕೇವಲ ಖನಿಜ ಪರಿಶೋಧನೆಗೆ ಸೀಮಿತವಾಗಿಲ್ಲದೆ ಸಾಗರ ವಿಜ್ಞಾನಗಳ ಅಭಿವೃದ್ಧಿ, ಜಲ ಸಸ್ಯ ಮತ್ತು ಪ್ರಾಣಿಗಳ ಪರಿಶೋಧನೆ ಮತ್ತು ಇತರ ಸಾಗರಗಳ ಜೀವವೈವಿಧ್ಯದ ಸಂರಕ್ಷಣೆ ಎಂದು ಹೇಳಿದರು.

<><*<><>*><>

ಅಗ್ನಿಪಥ್ ಯೋಜನೆಯನ್ನು ಸೈನಿಕ ಸಮಾನ್ ಯೋಜನೆ ಎಂದು ಮರುಪ್ರಾರಂಭಿಸಲಾಗಿದೆ ಎಂಬ ವಾಟ್ಸಾಪ್ ಸಂದೇಶ ನಕಲಿ ಎಂದು ಸರ್ಕಾರ ಹೇಳಿದೆ. ಕೆಲಸದ ಅವಧಿಯನ್ನು ಏಳು ವರ್ಷಗಳವರೆಗೆ ವಿಸ್ತರಿಸುವುದು, ಶೇಕಡಾ ೬೦ ರಷ್ಟು ಕಾಯಂ ಸಿಬ್ಬಂದಿ ಮತ್ತು ಆದಾಯವನ್ನು ಹೆಚ್ಚಿಸುವುದು ಸೇರಿದಂತೆ ಹಲವಾರು ಬದಲಾವಣೆಗಳೊಂದಿಗೆ ಯೋಜನೆಯನ್ನು ಮರುಪ್ರಾರಂಭಿಸಲಾಗಿದೆ ಎಂಬ ತಪ್ಪು ಸಂದೇಶವು ಹರದಾಡುತ್ತಿದೆ.

<><*<><>*><>

ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಡಿ ಗುಂಪಿನ ಪಂದ್ಯದಲ್ಲಿ ನೆದರ್‌ಲ್ಯಾಂಡ್ಸ್ ವಿರುದ್ಧ ಶ್ರೀಲಂಕಾ ತಂಡ ೮೩ ರನ್‌ಗಳ ಜಯಗಳಿಸಿದೆ. ೨೦೧ ರನ್‌ಗಳ ಬೆನ್ನತ್ತಿದ ನೆದರ್‌ಲ್ಯಾಂಡ್ಸ್ ತಂಡ ೧೬.೪ ಓವರ್‌ಗಳಲ್ಲಿ ಎಲ್ಲ ವಿಕೆಟ್ ಕಳೆದುಕೊಂಡು ೧೧೮ ರನ್ ಗಳಿಸಲು ಶಕ್ತವಾಯಿತು. ಇನ್ನೊಂದು ಪಂದ್ಯದಲ್ಲಿ ಬಾಂಗ್ಲಾದೇಶ ತಂಡ ನೇಪಾಳ ವಿರುದ್ಧ ೨೧ ರನ್‌ಗಳ ಜಯಗಳಿಸಿತು.

<><*<><>*><>

ಪಶ್ಚಿಮ ಬಂಗಾಳದ ಡಾರ್ಜಿಲಿಂಗ್ ಜಿಲ್ಲೆಯಲ್ಲಿ ಕಾಂಚನಜುಂಗಾ ಎಕ್ಸ್‌ಪ್ರೆಸ್ ರೈಲಿಗೆ ಗೂಡ್ಸ್ ರೈಲೊಂದು ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ ೫ ಮಂದಿ ಸಾವನ್ನಪ್ಪಿ, ಹಲವರು ಗಾಯಗೊಂಡಿದ್ದಾರೆ. ರೈಲ್ವೆ ಅಧಿಕಾರಿ ಮೂಲಗಳ ಪ್ರಕಾರ ಕಂಟೈನರ್ ರೈಲು ಸಿಗ್ನಲ್ ಅನ್ನು ಮೀರಿ ಪ್ಯಾಸೆಂಜರ್ ರೈಲಿನ ಹಿಂಭಾಗಕ್ಕೆ ಡಿಕ್ಕಿ ಹೊಡೆದಿದೆ. ರಕ್ಷಣಾ ಕಾರ್ಯಾಚರಣೆಗಾಗಿ ಎನ್‌ಡಿಆರ್‌ಎಫ್, ವಿಭಾಗೀಯ ತಂಡ ಮತ್ತು ೧೫ ಆಂಬ್ಯುಲೆನ್ಸ್‌ಗಳು ಅಪಘಾತ ಸ್ಥಳಕ್ಕೆ ತಲುಪಿವೆ. ರೈಲು ಅಪಘಾತಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಹಾಗೂ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಸಂತಾಪ ವ್ಯಕ್ತಪಡಿಸಿದ್ದಾರೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೨.೩೦ ಕ್ಕೆ <>*><>